ಊ) 1) ಕೆಳಸಾನಾಲ ಯೋಜನೆ : ರೂ. 44.78 ಕೋಟಿ.

2) ಬಂಡೂರುನಾಲಾ ಯೋಜನೆ: ರೂ. 49.20 ಕೋಟಿ

ಒಟ್ಟು ರೂ 93.98 ಕೋಟಿ

532(679) ಶ್ರೀ ಸಿದ್ದು ಸಾವದಿ (ಜಮಖಂಡಿ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು ಇರುವ ನಿಯಮಾವಳಿಗಳೇನು;

ಆ) ಜಮಖಂಡಿ, ರಬಕವಿ, ಬನಹಟ್ಟಿ ಮತ್ತು ಹುನ್ನೂರ ಈ ಮೂರು ಕಡೆ ಪ್ರಥಮ ದರ್ಜೆ ಕಾಲೇಜು ಅವಶ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಸ್ಥಳಗಳಲ್ಲಿ ಪ್ರಥಮ ದರ್ಜೆ ಕಾಲೇಜುಗಳಿಗಾಗಿ ಅನೇಕ ಬಾರಿ ಅರ್ಜಿ ಸಲ್ಲಿಸಿದರೂ ಇದುವರೆವಿಗೂ ಪ್ರಾರಂಭಿಸದೇ ಇರಲು ಕಾರಣವೇನು;

ಈ) ಇದರಿಂದ ಬಡವರು ಹರಿಜನ ಗಿರಿಜನರ ಮತ್ತು ಕೂಲಿಕಾರರ ಮಕ್ಕಳು ಉನ್ನತ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಖಾಸಗಿ ಸಂಸ್ಥೆಯವರ ಡೊನೇಶನ್ ಹಾವಳಿಯಿಂದ ವಿದ್ಯಾರ್ಥಿಗಳು ಶಾಲೆ ಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):

ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು ನಿಯಮಗಳನ್ನು ರೂಪಿಸಿರುವುದಿಲ್ಲ. ಆದರೆ, ಕೆಲವು ಮುಖ್ಯಾಂಶಗಳ ಬಗ್ಗೆ ಮಾಹಿತಿಯನ್ನು ಪಡೆಯಲು ಒಂದು ನಿಗದಿತ ನಮೂನೆಯನ್ನು ರೂಪಿಸಿಕೊಳ್ಳಲಾಗಿದೆ.

ಆ) ಜಮಖಂಡಿಯಲ್ಲಿ ಸರ್ಕಾರಿ ಮಹಿಳಾ ಪದವಿ ಕಾಲೇಜು ಇದೆ.

ಹುನ್ನೂರ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಸೂಕ್ತ ಸ್ಥಳ ಪರಿಶೀಲನಾ ವರದಿಯನ್ನು ಪಡೆಯಲು ಕ್ರಮಕೈಗೊಳ್ಳಲಾಗಿದೆ. ವರದಿ ಬಂದ ನಂತರ ಪರಿಶೀಲಿಸಲಾಗುತ್ತದೆ.

ಇತರೆ ಸ್ಥಳಗಳಾದ ರಬಕವಿ–ಬನಹಟ್ಟಿಯಲ್ಲಿ ಸರ್ಕಾರಿ ಪದವಿ ಕಾಲೇಜುಗಳನ್ನು ಪ್ರಾರಂಭಿಸಬೇಕೆಂಬ ವಿಷಯ ಸರ್ಕಾರದ ಮುಂದಿರುವುದಿಲ್ಲ.

ಇ) ರಬಕವಿ–ಬನಹಟ್ಟಿಯಲ್ಲಿ ಸರ್ಕಾರಿ ಪದವಿ ಕಾಲೇಜುಗಳನ್ನು ಪ್ರಾರಂಭಿಸಲು ಯಾವುದೇ ಬೇಡಿಕೆಗಳು ಸ್ವೀಕೃತವಾಗಿರುವುದಿಲ್ಲ.

ಈ) ಇಲ್ಲ

ಉ) ಇಲ್ಲ

533(680) ಶ್ರೀ ಸಿದ್ದು ಸಾವದಿ (ಜಮಖಂಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಇರುವ ನಿಯಮಾವಳಿಗಳಾವುವು;